ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE 22/4/21

## ಕಂದಾಯ ಸಚಿವ ಆರ್. ಅಶೋಕ ಎಚ್ಚರಿಕೆ

# ಮಾರ್ಗಸೂಚಿ ಪಾಲಿಸದಿದ್ದರೆ ಕಠಿಣ ಕ್ರಮ

ಪ್ರಜಾವಾಣಿ ವಾರ್ತೆ 22-4-21

ಬೆಂಗಳೂರು: ಕರ್ಫ್ಯೂ ಅವಧಿಯಲ್ಲಿ ಕೋವಿಡ್ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸದೇ ಇದ್ದರೆ, ಇನ್ನೂ ಕಠಿಣ ನಿಯಮಗಳನ್ನು ಜಾರಿ ಮಾಡುವುದು ಅನಿವಾರ್ಯ ಎಂದು ಕಂದಾಯ ಸಚಿವ ಆರ್.ಅಶೋಕ ಎಚ್ಚರಿಕೆ ನೀಡಿದ್ದಾರೆ.

ಕೊರೊನಾ ಸೋಂಕಿನ ಸರಪಳಿ ಮುರಿಯಲು ಸಾರ್ವಜನಿಕರು ಮನೆಯಲ್ಲೇ ಇರಬೇಕು. ಅನಿವಾರ್ಯ ಇದ್ದರಷ್ಟೇ ಹೊರಗೆ ಬರಬೇಕು. 14 ದಿನಗಳಲ್ಲಿ ಸೋಂಕು ಸರಪಳಿ ಮುರಿದರೆ ಮುಂದೆ ಕಠಿಣ ಕ್ರಮಗಳ ಜಾರಿಯಿಂದ ತಪ್ಪಿಸಲುಕೊಳ್ಳಲು ಸಾಧ್ಯ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ಮುಂದಿನ ಎರಡು ತಿಂಗಳು ಹೆಚ್ಚು ಜಾಗ್ರತೆ ವಹಿಸಿ, ಕೋವಿಡ್ ಮಾರ್ಗ-ಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾಗಿದೆ.

ಮಹಾರಾಷ್ಟ್ರ ಮತ್ತು ದೆಹಲಿಯಲ್ಲಿ ಕೋವಿಡ್ ತಾರಕಕ್ಕೆ ಏರಿದೆ. ಅಲ್ಲಿ ರೀತಿ ಇಲ್ಲಿ ಉಲ್ಬಣ ಆಗಬಾರದು ಎಂದು ಅವರು ತಿಳಿಸಿದರು.

**ಕರ್ಫ್ಯೂ ಸಹಕಾರಿ:** ಮೇ 4 ರವರೆಗಿನ ರಾತ್ರಿ ಕರ್ಫ್ಯೂ ಮತ್ತು ವಾರಾಂತ್ಯದ ಬಂದ್‌ನಿಂದ ಕೊರೊನಾ ಸೋಂಕಿನ ಸರಪಳಿ ಮುರಿಯಲು ಸಾಧ್ಯ ಎಂದು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಹೇಳಿದರು.

ತಾಂತ್ರಿಕ ಸಲಹಾ ಸಮಿತಿಯ ತಜ್ಞರು ವೈಜ್ಞಾನಿಕ ಆಧಾರದ ಮೇಲೆ ನೀಡಿರುವ ಸಲಹೆಗಳ ಮೇರೆಗೆ ಮಾರ್ಗಸೂಚಿ ರೂಪಿಸಲಾಗಿದೆ. ಸಾರ್ವಜನಿಕರು ಇದನ್ನು ಕಟ್ಟುನಿಟ್ಟಾಗಿ ಪಾಲಿಸಿದರೆ, ಮುಂದಿನ ಮೂರು–ನಾಲ್ಕು ದಿನಗಳಲ್ಲಿ ಸೋಂಕಿನ ಪ್ರಮಾಣ ಇಳಿಕೆಯಾಗುತ್ತದೆ ಎಂದರು.

## ವಿವಿಗಳಲ್ಲಿ ಕೋವಿಡ್ ನಿರ್ವಹಣಾ ಸಮಿತಿ ರಚಿಸಿ: ರಾಜ್ಯಪಾಲ

ಬೆಂಗಳೂರು: ಸರ್ಕಾರಿ ಮತ್ತು ಖಾಸಗಿ ವಲಯದ ಎಲ್ಲ 33 ವಿಶ್ವವಿದ್ಯಾಲಯಗಳಲ್ಲಿ ಕೋವಿಡ್ ನಿರ್ವಹಣಾ ಸಮಿತಿ ರಚಿಸುವಂತೆ ಕುಲಪತಿಗಳಿಗೆ ರಾಜ್ಯಪಾಲ ವಜುಭಾಯಿ ವಾಲಾ ಸೂಚಿಸಿದರು.

ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಕೋವಿಡ್ ನಿರ್ವಹಣೆ ಉದ್ದೇಶದಿಂದ ಕುಲಪತಿಗಳ ಜೊತೆ ರಾಜಭವನದಲ್ಲಿ ಬುಧವಾರ ಅವರು ಸಮಾಲೋಚನೆ ನಡೆಸಿದರು. ಉನ್ನತ ಶಿಕ್ಷಣ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ ಇದ್ದರು.

ಎಲ್ಲ ವಿಶ್ವವಿದ್ಯಾಲಯಗಳು, ಅವುಗಳ ವ್ಯಾಪ್ತಿಯ ಕಾಲೇಜುಗಳು, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕೋವಿಡ್ ಮಾರ್ಗಸೂಚಿ ಕಟ್ಟುನಿಟ್ಟಾಗಿ ಪಾಲಿಸುವಂತೆ ನಿಗಾ ವಹಿಸಬೇಕು ಎಂದು ಕುಲಪತಿಗಳಿಗೆ ವಾಲಾ ನಿರ್ದೇಶನ ನೀಡಿದರು.

18 ವರ್ಷ ದಾಟಿದ ಎಲ್ಲರಿಗೂ ಮೇ 1ರಿಂದ ಲಸಿಕೆ ನೀಡಲಾಗುವುದು. ಆಯಾ ವಿಶ್ವವಿದ್ಯಾಲಯ ಹಾಗೂ ಅದರ ವ್ಯಾಪ್ತಿಯ ಸಂಸ್ಥೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ಲಸಿಕೆ ಹಾಕಿಸಿಕೊಳ್ಳುವಂತೆ ಮನವೊಲಿಕೆ ಸೇರಿ ಎಲ್ಲ ಕ್ರಮಗಳನ್ನೂ ಕೈಗೊಳ್ಳಬೇಕು ಎಂದೂ ಅವರು ಸೂಚಿಸಿದರು.

**ಪರೀಕ್ಷೆ ಮಾಡಿಸಿ:** ‘ವಿದ್ಯಾರ್ಥಿಗಳಲ್ಲಿ ಅಥವಾ ಸಿಬ್ಬಂದಿಯಲ್ಲಿ ಕೋವಿಡ್ ರೋಗಲಕ್ಷಣ ಕಂಡುಬಂದರೆ ತಕ್ಷಣ ಪರೀಕ್ಷೆ ಮಾಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಕುಲಪತಿಗಳು, ಕುಲಸಚಿವರು ಹಾಗೂ ಸಿಬ್ಬಂದಿ ಕೆಲಸ ಮಾಡಬೇಕು’ ಎಂದು ಅಶ್ವತ್ಥನಾರಾಯಣ ಸಲಹೆ ಮಾಡಿದರು.

‘ಇಡೀ ರಾಜ್ಯದಲ್ಲಿ ಆರು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದಾರೆ. ಎಲ್ಲರೂ ಲಸಿಕೆ ಪಡೆಯುವಂತೆ ಪ್ರೇರೇಪಿಸಬೇಕು. ಜೊತೆಗೆ ಪೋಷಕರು ಲಸಿಕೆ ಪಡೆದರೆ ಅದೇ ಒಂದು ದೊಡ್ಡ ಮೈಲುಗಲ್ಲು ಆಗುತ್ತದೆ’ ಎಂದರು.

‘ಆಯಾ ವಿಶ್ವವಿದ್ಯಾಲಯಗಳಲ್ಲಿ ಇರುವ ಎಲ್ಲ ಸೌಲಭ್ಯಗಳನ್ನು ಕೋವಿಡ್ ನಿರ್ವಹಣೆಗಾಗಿ ಬಳಸಿಕೊಳ್ಳಿ. ನಿಮ್ಮ ಸುತ್ತಮುತ್ತಲಿನ ಪ್ರದೇಶಗಳ ಜನರ ಸಂಕಷ್ಟಕ್ಕೆ ಸ್ಪಂದಿಸಿ’ ಎಂದೂ ಅವರು ಹೇಳಿದರು.

## ‘ಸರ್ಕಾರದ ವೈಫಲ್ಯಕ್ಕೆ ಸೋಂಕಿನ ಸಂಖ್ಯೆ ಸಾಕ್ಷಿ’

**ಬೆಂಗಳೂರು: ‘ಕೋವಿಡ್ ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎನ್ನುವುದಕ್ಕೆ ಸೋಂಕಿನ ಸಂಖ್ಯೆಗಳೇ ಸಾಕ್ಷಿ. ಜನರ ಆಕ್ರೋಶಕ್ಕೆ ಹೆದರಿ ಮುಖ್ಯ-ಕಾರ್ಯದರ್ಶಿ ಮೂಲಕ ಸರ್ಕಾರ ಹೇಳಿಕೆಗಳನ್ನು ಕೊಡಿಸುತ್ತಿದೆ’ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಬುಧವಾರ ಟೀಕಿಸಿದರು.**

**ಸುದ್ದಿಗಾರರ ಜೊತೆ ಮಾತನಾಡಿದ ಅವರು, ‘ಕೋವಿಡ್ ತಾಂತ್ರಿಕ ಸಮಿತಿ ಸಲಹೆಯಂತೆ ನಿರ್ಧಾರ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಸಲಹೆ ನೀಡಿದ್ದೇವೆ. ರಾಜ್ಯಪಾಲರು ಕರೆದ ಸರ್ವಪಕ್ಷ ಸಭೆಯಲ್ಲಿ ಸರ್ಕಾರದ ವೈಫಲ್ಯಗಳನ್ನು ಹೇಳಿದ್ದೇವೆ. ಪ್ರಧಾನಿಯ ಸಂದೇಶ ಬಂದ ಬಳಿಕ ಲಾಕ್‌ಡೌನ್‌ನಿಂದ ಸರ್ಕಾರ ಹಿಂದೆ ಸರಿದಿರಬೇಕು’ ಎಂದರು.**

## ಕೋವಿಡ್ ನಿಯಂತ್ರಣ: ಜಿಲ್ಲಾ ಉಸ್ತುವಾರಿಗಳಿಗೆ ಸೂಚನೆ

ಬೆಂಗಳೂರು: ಎಲ್ಲ ಜಿಲ್ಲಾ ಉಸ್ತುವಾರಿ ಸಚಿವರು ಸಂಬಂಧಪಟ್ಟ ಜಿಲ್ಲೆಗಳಲ್ಲಿ ಕೊರೊನಾ ವೈರಾಣು ಹರಡುವುದನ್ನು ತಡೆಗಟ್ಟಲು ಕೂಡಲೇ ಕಾರ್ಯಪ್ರವೃತ್ತರಾಗಬೇಕು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸೂಚಿಸಿದ್ದಾರೆ.

ಕೋವಿಡ್ ನಿಯಂತ್ರಣದಲ್ಲಿ ಜಿಲ್ಲಾಡಳಿತಕ್ಕೆ ಸಹಕಾರ ನೀಡಬೇಕು. ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ನೀಡಬೇಕು. ಸೋಂಕಿತರಿಗೆ ಅಗತ್ಯ ವೈದ್ಯಕೀಯ ಸೌಲಭ್ಯವನ್ನು ಕೊಡಿಸಲು ತ್ವರಿತ ಕ್ರಮ ಕೈಗೊಂಡು ಪರಿಸ್ಥಿತಿ ಉಲ್ಬಣಿಸದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.ಕೆಲವು ಸಚಿವರನ್ನು ಬಿಟ್ಟು ಉಳಿದ ಬಹುತೇಕರು ಕೋವಿಡ್ ನಿಯಂತ್ರಣ ಕಾರ್ಯದ ಬಗ್ಗೆ ತಲೆ ಕೆಡಿಸಿಕೊಳ್ಳದೇ ಇರುವ ಕಾರಣ ಯಡಿಯೂರಪ್ಪ ಈ ಸೂಚನೆ ನೀಡಿದ್ದಾರೆ.